# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ





REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 18-07-2025 to 24-07-2025 ಬೆಲೆ: 7-00 ಸಂಪುಟ-5 ಸಂಚಿಕೆ-04 ಪುಟಗಳು-6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು







ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮತ್ತೆ ಮಳೆಯ ಅಬ್ಬರ ಹೆಚ್ಚಾಗುತ್ತಿದ್ದು, ಅಲ್ಲಲ್ಲಿ ಗುಡ್ಡ ಕುಸಿತಗಳ ಜೊತೆ ತಡೆ ಗೋಡೆಗಳ ಕುಸಿತದ ಪ್ರಕರಣಗಳು ವರದಿಯಾಗುತ್ತಿದೆ. ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ನಂ 75ರ ಕಡಬ ಕೌಕ್ರಾಡಿ ಗ್ರಾಮದ ಮಣ್ಣಗುಂಡಿಯಲ್ಲಿ ಗುಡ್ಡ ಕುಸಿದು ಹೆದ್ದಾರಿಯಲ್ಲಿ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡ ಘಟನೆ ನಡೆದಿದೆ.

## ಜಿಲ್ಲೆಗೆ ಕಾಲಿಡಲು ಬಿಡುವುದಿಲ್ಲ –ಭರತ್ ಶೆಟ್ಟಿ



**ಮಂಗಳೂರು:** ಬಿಜೆಪಿ ಸರಕಾರ ಇದ್ದಾಗ ಒಂದು ವಾರದಲ್ಲಿ 200ಕ್ಕೂ ಅಧಿಕ ಪರವಾನಿಗೆ ನೀಡಿ ಸಮಸ್ಯೆ ಬಗೆ ಹರಿಸಿತ್ತು. ಆದರೆ ಕಾಂಗ್ರೆಸ್‌ಗೆ ತಿಂಗಳು ಕಳೆದರೂ ಸಾಧ್ಯ ಆಗುತ್ತಿಲ್ಲ. ಮರಳು, ಕೆಂಪು ಕಲ್ಲಿಗೆ ದುಬಾರಿ ತೆರಿಗೆ ಹಾಕಿ ಜನರು ಮನೆ ಕಟ್ಟಲು ಆಗುತ್ತಿಲ್ಲ. ಇಲ್ಲಿನ ಸೋತ ರಾಜಕೀಯ ಪುಡಾರಿಗಳು ಕೇವಲ ಹಣ ಮಾಡುವಲ್ಲಿ ಇಂತಹ ಕೆಲಸ ಮಾಡುತ್ತಿದ್ದು ಜಿಲ್ಲಾ ಉಸ್ತುವಾರಿ ಸಚಿವರು ರಿಮೋಟ್ ಮೂಲಕ ಬೆಂಗಳೂರಿನಲ್ಲಿ ಆಡಳಿತ ಮಾಡುತ್ತಿದ್ದಾರೆ. ಇದೆ ರೀತಿ ಆಡಳಿತ ಮುಂದುವರಿದರೆ ಜಿಲ್ಲೆಗೆ ಕಾಲಿಡಲು ಬಿಡುವುದಿಲ್ಲ **3ನೇ ಪುಟಕ್ಕೆ**

## ಹೈಕಮಾಂಡ್ ತೀರ್ಮಾನಕ್ಕೆ ನಾವು ಬದ್ಧ –ಸಿಎಂ



**ಬೆಂಗಳೂರು:** ಹೈಕಮಾಂಡ್ ತೀರ್ಮಾನಕ್ಕೆ ನಾವು ಬದ್ಧರಾಗಿದ್ದು, ಆ ತೀರ್ಮಾನವನ್ನು ನಾನು ಮತ್ತು ಡಿ.ಕೆ. ಶಿವಕುಮಾರ್ ಅನುಸರಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ನಗರದ ಶಾಂಗ್ರಿಲಾ ಹೋಟೆಲ್‌ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕದಲ್ಲಿ ನಾಯಕತ್ವ ಬದಲಾವಣೆಯ ವಿಚಾರದಲ್ಲಿ ಹೈಕಮಾಂಡ್ ನಿರ್ಣಯ ತೆಗೆದುಕೊಳ್ಳಲಿದೆ. ಆ ನಿರ್ಣಯವನ್ನು ನಾನು ಮತ್ತು ಡಿ.ಕೆ. ಶಿವಕುಮಾರ್ ಪಾಲಿಸುತ್ತೇವೆ ಎಂದರು. ಜಾತಿ ಗಣತಿಯನ್ನು ತೆಲಂಗಾಣ **3ನೇ ಪುಟಕ್ಕೆ**

## ಹೃದಯಾಘಾತಕ್ಕೂ ವ್ಯಾಕ್ಸಿನ್‌ಗೂ ಸಂಬಂಧವಿಲ್ಲ –ಡಾ. ಪಾಟೀಲ್

ಹಾವೇರಿ: ರಾಜ್ಯದಲ್ಲಿ ಹೃದಯಾಘಾತಗಳಿಂದ ಹೆಚ್ಚು ಸಾವುಗಳಾಗುತ್ತಿವೆ ಎಂಬ ತಪ್ಪು ಸಂದೇಶ ಹೋಗಿದೆ. ಹೃದಯಾಘಾತಗಳಿಂದ ಹೆಚ್ಚು ಸಾವಾಗುತ್ತಿದೆ ಎಂಬುದು ಸುಳ್ಳು. ಜನರಲ್ಲಿ ಕೊರೊನಾ ವ್ಯಾಕ್ಸಿನ್ ಹಾಕಿಸಿಕೊಂಡವರಿಗೆ ಹೃದಯಾಘಾತವಾಗುತ್ತದೆ ಎಂಬ ತಪ್ಪು ನಂಬಿಕೆ ಇದೆ. ಹೃದಯಾಘಾತಕ್ಕೂ ವ್ಯಾಕ್ಸಿನ್‌ಗೂ ಯಾವುದೇ ಸಂಬಂಧವಿಲ್ಲ ಎಂದು ವೈದ್ಯಕೀಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಕಳೆದ ಆರು ತಿಂಗಳ ಅಂಕಿ-ಸಂಖ್ಯೆ ವಿಶ್ಲೇಷಣೆ ಮಾಡಿದ್ದೇವೆ. ಇದಕ್ಕಾಗಿ ಒಂದು **3ನೇ ಪುಟಕ್ಕೆ**









# ಸುದ್ದಿ ತುಣುಕು

ಅಧಿಕ ಬಡ್ಡಿ ನೀಡುವುದಾಗಿ ಆಮಿಷವೊಡ್ಡಿ 15,000ಕ್ಕೂ ಹೆಚ್ಚು ಗ್ರಾಹಕರಿಗೆ 100 ಕೋಟಿ ರೂ. ವಂಚನೆ ಮಾಡಿದ್ದಾರೆ ಎಂದ ಆರೋಪಕ್ಕೆ ಸಂಬಂಧಿಸಿದಂತೆ ನಗರದ ಕೋ-ಆಪರೇಟಿವ್ ಸೊಸೈಟಿಯೊಂದರ ಮೇಲೆ ಜಾರಿ ನಿರ್ದೇಶಾನಾಲಯ ದಾಳಿ ಮಾಡಿದೆ.

ಆಷಾಢ ಮಾಸದ ಕೃಷ್ಣ ಪಕ್ಷದ ರೇವತಿ ನಕ್ಷತ್ರದಲ್ಲಿ ಇಂದು ಚಾಮುಂಡಿ ಬೆಟ್ಟದಲ್ಲಿ ನಾಡ ಅದಿದೇವತೆ ಚಾಮುಂಡೇಶ್ವರಿ ತಾಯಿಯ ಉತ್ಸವ ಮೂರ್ತಿಯ ಪ್ರತಿಷ್ಠಾಪನೆ ಮಾಡುವ ಮೂಲಕ ಅಮ್ಮನವರ ವರ್ಧಂತಿ ಸಂಭ್ರಮದಿಂದ ನೆರವೇರಿತು.

ಈ ಹಿಂದೆ ದಸರಾ ವೇಳೆ ಅರಮನೆ ಆವರಣದಲ್ಲೇ ಹೆಣ್ಣಾನೆ ಮರಿಗೆ ಜನ್ಮ ನೀಡಿದ ಪರಿಣಾಮ, ಈ ಬಾರಿ ಹೆಣ್ಣು ಆನೆಗಳ ಗರ್ಭಧಾರಣೆಯ ಪರೀಕ್ಷೆ ವರದಿ ಬಳಿಕ ದಸರಾ ಗಜಪಡೆ ಅಂತಿಮ ಪಟ್ಟಿ ಸಿದ್ಧವಾಗಲಿದೆ.

ಕಡಬ ತಾಲೂಕಿನ ಸವಣೂರಿನ ಆರೇಲ್ತಡಿ ದೈವಸ್ಥಾನಕ್ಕೆ ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು.

ಹೊಸಪೇಟೆ ನಗರದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಕೆಲ ಗಂಟೆಗಳ ಕಾಲ ಕರೆಂಟ್ ಇಲ್ಲದೆ, ಜನರು ಪರದಾಡಿದ ಘಟನೆ ನಡೆದಿದೆ.

ತೀರ್ಥಹಳ್ಳಿಯ ವಿಠಲ ನಗರದಲ್ಲಿ ಗಾಂಜಾ ಮಾರಾಟ ಮಾಡುತ್ತಿದ್ದ ಐವರಿಗೆ ನ್ಯಾಯಾಲಯವು ದಂಡ ಸಹಿತ ನಾಲ್ಕು ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿದೆ.

ಕರ್ನಾಟಕ ಉಸ್ತುವಾರಿ ಸುರ್ಜೇವಾಲ ಅವರ ಸಚಿವರ ಜೊತೆಗಿನ ಮೂರು ದಿನಗಳಿಂದ ನಡೆಯುತ್ತಿರುವ ಒನ್ ಟು ಒನ್ ಸಭೆ ಮುಕ್ತಾಯವಾಗಿದೆ. ಸಚಿವರಿಗೆ ಅವರು ಕೆಲ ಅಗತ್ಯ ಸಲಹೆ, ಸೂಚನೆಗಳನ್ನು ನೀಡಿದ್ದಾರೆ.

ಕರ್ನಾಟಕ ಒಂದು ಟ್ರಿಲಿಯನ್ ಡಾಲರ್ ಆರ್ಥಿಕತೆ ಸಾಧಿಸುವ ಮೊದಲ ರಾಜ್ಯವಾಗಲಿದೆ ಎಂದು ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಪ್ರಯಾಣಿಕರ ಸುರಕ್ಷತೆ ಕುರಿತು ಹೆಚ್ಚು ಜಾಗ್ರತೆ ಹಿನ್ನೆಲೆಯಲ್ಲಿ ಹುಬ್ಬಳ್ಳಿ ವಿಮಾನ ನಿಲ್ದಾಣದ ರನ್ ವೇ ಸುತ್ತಮುತ್ತ ಪ್ರಾಣಿ ಮತ್ತು ಪಕ್ಷಿಗಳ ನಿಯಂತ್ರಣಕ್ಕೆ ಚಿಂತನೆ ನಡೆಸಲಾಗುತ್ತಿದೆ.

ನಾಯಕತ್ವ ಬದಲಾವಣೆ ಕುರಿತು ನಮ್ಮ ಹೈಕಮಾಂಡ್ ತೆಗೆದುಕೊಳ್ಳುವ ನಿರ್ಧಾರಕ್ಕೆ ನಾನು ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಬದ್ಧರಾಗಿರುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಬೆಂಗಳೂರು ನಗರದ ಪ್ರಸಿದ್ಧ ಗಾಳಿ ಆಂಜನೇಯಸ್ವಾಮಿ ದೇವಾಲಯವನ್ನು ಮುಜರಾಯಿ ಇಲಾಖೆಯ ಸುಪರ್ದಿಗೆ ಪಡೆದು ರಾಜ್ಯ ಸರ್ಕಾರ ಹೊರಡಿಸಿರುವ ಆದೇಶಕ್ಕೆ ತಡೆಯಾಜ್ಞೆ ನೀಡಲು ಹೈಕೋರ್ಟ್ ನಿರಾಕರಿಸಿದೆ.

ಮಧ್ಯಪ್ರದೇಶದ ಇಂದೋರ್ ನಗರವು 2024-25ನೇ ಸಾಲಿನ ಸ್ವಚ್ಛ ಸರ್ವೇಕ್ಷಣ ಪಟ್ಟಿಯಲ್ಲಿ ಮೊದಲ ಸ್ಥಾನ ಪಡೆದುಕೊಂಡಿದೆ. ಈ ಮೂಲಕ ಸತತ 8ನೇ ಬಾರಿಗೆ ದೇಶದ 'ಅತ್ಯಂತ ಸ್ವಚ್ಛ ನಗರ' ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಜಮ್ಮು ಮತ್ತು ಕಾಶ್ಮೀರದ ದೋಡಾದಲ್ಲಿ ಚಾಲಕನ ನಿಯಂತ್ರಣ ತಪ್ಪಿದ ಪ್ರಯಾಣಿಕರಿದ್ದ ವಾಹನವೊಂದು ಕಂದಕಕ್ಕೆ ಉರುಳಿ ಬಿದ್ದು ಏಳು ಜನರು ಸಾವನ್ನಪ್ಪಿದ್ದಾರೆ.

# ಏಡಿ ಸುಕ್ಕ




**ಬೇಕಾಗುವ ಸಾಮಗ್ರಿ :**

ಏಡಿ/ದೆಂಜಿ – 1 ಕೆಜಿ
ಬ್ಯಾಡಗಿ ಮೆಣಸು 10-15
ಹುಣಸೆ ಹುಳಿ – ಸ್ವಲ್ಪ
ಜೀರಿಗೆ-1 ಚಮಚ
ಮೆಂತೆ-1/4 ಚಮಚ
ಸಾಸಿವೆ-1/2 ಚಮಚ
ದನಿಯಾ- 2 ಚಮಚ
ಅರಿಶಿಣ ಪುಡಿ-1 ಚಮಚ
ಟೊಮೆಟೊ- 2
ಬೆಳ್ಳುಳ್ಳಿ 10-12 ಎಸಳು
ಹಸಿ ಮೆಣಸು-2
ತೆಂಗಿನಕಾಯಿ ತುರಿ- 1ಕಪ್
ಉಪ್ಪು ರುಚಿಗೆ ತಕ್ಕಷ್ಟು

**ಮಾಡುವ ವಿಧಾನ :**

ಮೊದಲಿಗೆ ಬ್ಯಾಡಗಿ ಮೆಣಸನ್ನು ಸ್ವಲ್ಪ ರೋಸ್ಟ್ ಮಾಡಿ, ಅದಕ್ಕೆ ಜೀರಿಗೆ, ದನಿಯಾ ಮತ್ತು ಮೆಂತೆ ಹಾಕಿ ಸ್ವಲ್ಪ ಬಿಸಿ ಮಾಡಿಕೊಳ್ಳಬೇಕು. ನಂತರ ಇದರೊಂದಿಗೆ ಹುಣಸೆಹುಳಿ ಹಾಕಿ ರುಬ್ಬಿಕೊಳ್ಳಬೇಕು. ನಂತರ ಬಾಣಲೆ ಬಿಸಿ ಮಾಡಿ ಅದಕ್ಕೆ ಎಣ್ಣೆ ಹಾಕಿ ಅದಕ್ಕೆ ಸಾಸಿವೆ ಹಾಕಿ, ಸಾಸಿವೆ ಸಿಡಿದ ನಂತರ ಈರುಳ್ಳಿ, ಹಸಿ ಮೆಣಸು ಹಾಕಿ 2-3 ನಿಮಿಷ ಫ್ರೈ ಮಾಡಿಕೊಳ್ಳಬೇಕು. ನಂತರ ಅದಕ್ಕೆ ಟೊಮೆಟೊ ಹಾಕಿ ಅದು ಮೆತ್ತಗಾದ ಮೇಲೆ ಸ್ವಚ್ಛ ಮಾಡಿಟ್ಟುಕೊಂಡ ಏಡಿ/ದೆಂಜಿ ಹಾಕಬೇಕು. ನಂತರ ಅದಕ್ಕೆ ರುಬ್ಬಿದ ಮಸಾಲೆ, ಅರಿಶಿಣ ಪುಡಿ, ರುಚಿಗೆ ತಕ್ಕಷ್ಟು ಉಪ್ಪು, ಸ್ವಲ್ಪ ನೀರು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿಕೊಂಡು ಸೇರಿಸಿ 10 ನಿಮಿಷ ಬೇಯಿಸಿಕೊಳ್ಳಬೇಕು. ಈಗ ಮಸಾಲ ಸಂಪೂರ್ಣ ಡ್ರೈಯಾಗಿದ್ದರೆ ಅದಕ್ಕೆ ತೆಂಗಿನ ತುರಿ ಹಾಕಿ, ಚೆನ್ನಾಗಿ ಮಿಶ್ರಣ ಮಾಡಿ ಕಡಿಮೆ ಉರಿಯಲ್ಲಿ ಮತ್ತೆ 10 ನಿಮಿಷ ಬೇಯಿಸಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಏಡಿ ಸುಕ್ಕ ಸವಿಯಲು ಸಿದ್ಧ.

# ಭಾರತ, ಚೀನಾ, ಬ್ರೆಜಿಲ್ ದೇಶಗಳಿಗೆ NATO ಮುಖ್ಯಸ್ಥರ ಎಚ್ಚರಿಕೆ




ಅಮೇರಿಕಾ : ರಷ್ಯಾದೊಂದಿಗೆ ಭಾರತ, ಚೀನಾ ಮತ್ತು ಬ್ರೆಜಿಲ್‌ಗಳು ವ್ಯಾಪಾರ ಮುಂದುವರೆಸಿದರೆ ಆರ್ಥಿಕ ನಿರ್ಬಂಧಗಳಿಂದ ತೀವ್ರ ತೊಂದರೆ ಎದುರಿಸಬೇಕಾದೀತು ಎಂದು ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಎಚ್ಚರಿಕೆ ನೀಡಿದ್ದಾರೆ. 50 ದಿನದೊಳಗೆ ರಷ್ಯಾ ಶಾಂತಿ ಮಾತುಕತೆಯ ವಿಚಾರವಾಗಿ ಗಂಭೀರವಾಗಿ ವರ್ತಿಸದೆ ಹೋದಲ್ಲಿ ಭಾರತ, ಚೀನಾ ಮತ್ತು ಬ್ರೆಜಿಲ್‌ನಂತಹ ದೇಶಗಳ ಮೇಲೆ ನಿರ್ಬಂಧಗಳನ್ನು ಹೇರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ.

# 17 ವಲಸೆ ನ್ಯಾಯಾಲಯಗಳ ನ್ಯಾಯಾಧೀಶರನ್ನು ವಜಾಗೊಳಿಸಿದ : ಟ್ರಂಪ್ ಸರಕಾರ

ವಾಷಿಂಗ್ಟನ್ : ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾದ ಬಳಿಕ ಅಕ್ರಮ ವಲಸಿಗರನ್ನು ದೇಶದಿಂದ ಹೊರಹಾಕುವ ಪ್ರಕ್ರಿಯೆ ಜೋರಾಗಿದೆ. ಗಡಿಪಾರಾಗಬೇಕಾದ ಜನರು ವಲಸೆ ನ್ಯಾಯಾಲಯಗಳ ಮೊರೆ ಹೋಗುತ್ತಿದ್ದರು. ಇದನ್ನು ತಡೆಯಲು ಟ್ರಂಪ್ ಸರ್ಕಾರ ಇತ್ತೀಚೆಗೆ 17 ವಲಸೆ ನ್ಯಾಯಾಲಯಗಳ ನ್ಯಾಯಾಧೀಶರನ್ನು ವಜಾಗೊಳಿಸಿದೆ. ವಲಸೆ ನ್ಯಾಯಾಲಯಗಳ ಮೂಲಕ ರಕ್ಷಣೆ ಪಡೆಯಲು



ಯತ್ನಿಸುತ್ತಿದ್ದ ವಲಸಿಗರಿಗೆ ಇದು ತೀವ್ರ ಆತಂಕ ಉಂಟು ಮಾಡಿದೆ.

# ಸಚಿವ ಜೈಶಂಕರ್ ಚೀನಾ ಅಧ್ಯಕ್ಷ ಜಿನ್‌ಪಿಂಗ್ ಭೇಟಿ



ಚೀನಾ : ಚೀನಾ ಪ್ರವಾಸದಲ್ಲಿರುವ ಭಾರತದ ವಿದೇಶಾಂಗ ಸಚಿವ ಡಾ.ಎಸ್. ಜೈಶಂಕರ್ ಅವರು ಡ್ರ್ಯಾಗನ್ ರಾಷ್ಟ್ರದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರನ್ನು ಭೇಟಿಯಾಗಿ, ಮಾತುಕತೆ ನಡೆಸಿದ್ದಾರೆ. 2020ರಲ್ಲಿ ಸಂಭವಿಸಿದ್ದ ಗಲ್ವಾನ್ ಸಂಘರ್ಷದ ಬಳಿಕದ ಮೊದಲ ಭೇಟಿ ಇದಾಗಿದೆ. ಶಾಂಘೈ ಸಹಕಾರ ಒಕ್ಕೂಟದ (ಎಸ್‌ಸಿಒ) ವಿದೇಶಾಂಗ ಸಚಿವರ ಸಭೆ ಹಿನ್ನೆಲೆ ಜೈಶಂಕರ್ ಅವರು ಎರಡು ದಿನಗಳ ಚೀನಾ ಪ್ರವಾಸ ಕೈಗೊಂಡಿದ್ದಾರೆ. ಈ ಸಭೆಗೂ ಮೊದಲು ಕ್ಸಿ ಜಿನ್‌ಪಿಂಗ್ ಅವರನ್ನು ಭಾರತದ ವಿದೇಶಾಂಗ ಸಚಿವರು ನೇರಾನೇರ ಭೇಟಿಯಾಗಿ ಹಸ್ತಲಾಘವ ಮಾಡಿದ್ದಾರೆ.

# ತಾಂತ್ರಿಕ ದೋಷ ಕಂಡುಬಂದಿಲ್ಲ – ಕ್ಯಾಂಪ್‌ಬೆಲ್ ವಿಲ್ಸನ್

ನವದೆಹಲಿ: ಜೂನ್ 12ರಂದು ಅಹಮದಾಬಾದ್‌ನಲ್ಲಿ ಪತನಗೊಂಡ ವಿಮಾನದಲ್ಲಿ ಯಾವುದೇ ತಾಂತ್ರಿಕ ದೋಷ ಕಂಡುಬಂದಿಲ್ಲ ಎಂದು ತನಿಖೆ ನಡೆಸುತ್ತಿರುವ ಎಎಐಬಿ ಪ್ರಾಥಮಿಕ ವರದಿ ತಿಳಿಸಿದೆ ಎಂದು ಏರ್ ಇಂಡಿಯಾ ಸಿಇಒ ಕ್ಯಾಂಪ್‌ಬೆಲ್ ವಿಲ್ಸನ್ ಹೇಳಿದರು. ನೀಡಿರುವ ಏರ್ ಇಂಡಿಯಾ ಸಿಇಒ, "ಎಎಐಬಿ ಇನ್ನೂ ತನಿಖೆ ಮುಗಿಸಿಲ್ಲ. ಯಾವುದೇ ನಿಖರ ಕಾರಣಗಳನ್ನೂ ಗುರುತಿಸಿಲ್ಲ. ಹೀಗಾಗಿ, ಈ ಹಂತದಲ್ಲಿಯೇ ತೀರ್ಮಾನಕ್ಕೆ ಬರಬೇಕಿಲ್ಲ, ಪೈಲಟ್‌ಗಳು ಹಾರಾಟಕ್ಕೂ



ಮೊದಲು ಉತ್ತಮ ಸ್ಥಿತಿಯಲ್ಲಿದ್ದರು. ವೈದ್ಯಕೀಯವಾಗಿಯೂ ಯಾವುದೇ ಲೋಪ ಇರಲಿಲ್ಲ" ಎಂದಿದ್ದಾರೆ.

# ಬಂಡುಕೋರರ ಕ್ಯಾಂಪ್ ಮೇಲೆ ಡ್ರೋನ್ ಮತ್ತು ಕ್ಷಿಪಣಿ ದಾಳಿ



ಅಸ್ಸೋಂ : ಮಹತ್ತರ ಬೆಳವಣಿಗೆಯೊಂದರಲ್ಲಿ ಅಸ್ಸೋಂನ ಉಗ್ರ ಸಂಘಟನೆ ಉಲ್ಫಾ ಐ ಸಂಘಟನೆಯ ಕೆಲವರು ಸೇರಿದಂತೆ ಮ್ಯಾನ್ಮಾರ್ ಮೂಲದ ಬಂಡುಕೋರರ ಕ್ಯಾಂಪ್ ಮೇಲೆ ಡ್ರೋನ್ ಮತ್ತು ಕ್ಷಿಪಣಿ ದಾಳಿ ನಡೆದಿದೆ ಎಂದು ವರದಿಯಾಗಿದೆ. ಈ ದಾಳಿಗೆ ಸಂಬಂಧಿಸಿದಂತೆ ಭಾರತೀಯ ಸೇನೆಯಿಂದ ಯಾವುದೇ ಹೇಳಿಕೆ ಹೊರಬಿದ್ದಿಲ್ಲ. ಅಸ್ಸೋಂ ಸಿಎಂ ಹಿಮಂತ್ ಬಿಸ್ವಾ ಶರ್ಮಾ ಕೂಡ ಅಸ್ಸೋಂ ರಾಜ್ಯದಿಂದ ಈ ದಾಳಿ ನಡೆದಿಲ್ಲವೆಂದು ಹೇಳಿದ್ದಾರೆ. ಆದ್ರೆ ಉಲ್ಫಾ ಸ್ವತಂತ್ರ ಉಗ್ರ ಸಂಘಟನೆ ಮಾತ್ರ ಭಾರತೀಯ ಸೇನೆಯಿಂದ ನಡೆಸಲಾಗಿದೆ ಎಂದು ಆರೋಪಿಸಿದೆ.

# ಅಣ್ವಸ್ತ್ರ ಪ್ರಯೋಗಿಸುವ ಯಾವುದೇ ಯೋಚನೆ ಇರಲಿಲ್ಲ : ಶಹಬಾಜ್ ಶರೀಫ್

ಪಾಕಿಸ್ತಾನ : ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಗೆ ಪ್ರತಿಯಾಗಿ ಭಾರತ ಪಾಕಿಸ್ತಾನದಲ್ಲಿನ ಉಗ್ರ ನೆಲೆಗಳನ್ನು ಗುರಿಯಾಗಿಸಿ ದಾಳಿ ಮಾಡಿತ್ತು. ಈ ವೇಳೆ ಪಾಕಿಸ್ತಾನವು ಭಾರತದ ಮೇಲೆ ಅಣ್ವಸ್ತ್ರ ಬಳಸುವ ಬೆದರಿಕೆ ಹಾಕಿತ್ತು. ಆದರೆ, ಇದೀಗ 'ಅಂತಹ ಯಾವುದೇ ಯೋಚನೆ ಇರಲಿಲ್ಲ' ಎಂದು ಪ್ರಧಾನಿ ಶಹಬಾಜ್ ಶರೀಫ್ ಹೇಳಿದ್ದಾರೆ. ವಿದ್ಯಾರ್ಥಿಗಳ ಜೊತೆ ಸಂವಾದ ನಡೆಸಿದ ಪಾಕ್ ಪ್ರಧಾನಿ, "ನಮ್ಮ ದೇಶದ ಪರಮಾಣು ಕಾರ್ಯಕ್ರಮ ಇರುವುದು ಶಾಂತಿಯುತ



ಚಟುವಟಿಕೆಗಳು ಮತ್ತು ಸ್ವಯಂ ರಕ್ಷಣೆಗಾಗಿ ಮಾತ್ರವೇ ಹೊರತು, ಯಾವುದೇ ದೇಶದ ವಿರುದ್ಧ ಆಕ್ರಮಣ ನಡೆಸಲು ಅಲ್ಲ" ಎಂದರು.

# ನೂತನ ಐಸಿಸಿ ಟೆಸ್ಟ್ ರ‍್ಯಾಂಕಿಂಗ್




ದುಬೈ: ನೂತನ ಐಸಿಸಿ ಟೆಸ್ಟ್ ರ‍್ಯಾಂಕಿಂಗ್‌ನ ಬ್ಯಾಟರ್‌ಗಳ ಪಟ್ಟಿಯಲ್ಲಿ ಇಂಗ್ಲೆಂಡ್‌ನ ಅನುಭವಿ ಬ್ಯಾಟರ್ ಜೋರೂಟ್ 888 ಪಾಯಿಂಟ್‌ಗಳೊಂದಿಗೆ ಮತ್ತೆ ಅಗ್ರಸ್ಥಾನಕ್ಕೇರಿದ್ದಾರೆ. ಬೌಲರ್ ಹಾಗೂ ಅಂಡರ್ ಪಟ್ಟಿಯಲ್ಲಿ ಬೂಮ್ರಾ ಹಾಗೂ ಜಡೇಜ ಅವರು ಮೊದಲ ಸ್ಥಾನದಲ್ಲೇ ಮುಂದುವರೆದಿದ್ದಾರೆ. ಶಫಾಲಿ ಅವರು, ನಾಲ್ಕು ಸ್ಥಾನ ಬಡ್ತಿ ಪಡೆದು ಒಂಬತ್ತನೇ ಬ್ಯಾಂಕ್‌ಗೇರಿದ್ದಾರೆ.

# ಭಾರತದ ವಿರುದ್ಧ ಇಂಗ್ಲೆಂಡ್‌ಗೆ ರೋಚಕ ಗೆಲುವು

ಲಾರ್ಡ್ಸ್ : ಆಂಡ್ರಸನ್ ಮತ್ತು ತೆಂಡೂಲ್ಕರ್ ಟ್ರೋಫಿ ಭಾಗವಾಗಿ ನಡೆಯುತ್ತಿರುವ ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ಭಾರತ ತಂಡ ಸೋಲನ್ನು ಕಂಡಿದೆ. ಐತಿಹಾಸಿಕ ಲಾರ್ಡ್ ಮೈದಾನದಲ್ಲಿ ನಡೆದಿದ್ದ ಈ ಪಂದ್ಯದಲ್ಲಿ ಇಂಗ್ಲೆಂಡ್ ತಂಡ 22ರನ್‌ಗಳಿಂದ ಗೆಲುವು ಸಾಧಿಸಿತು. ಇದರೊಂದಿಗೆ ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ 2-1 ಅಂತರದಿಂದ ಮುನ್ನಡೆ ಸಾಧಿಸಿದೆ.



# ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ಬದ್ಧವಾಗಿದೆ : ಸಿದ್ದರಾಮಯ್ಯ



ಬೆಂಗಳೂರು: ಕರ್ನಾಟಕದ ಮುಖ್ಯಮಂತ್ರಿಯಾಗಿ ನಾನು ದೃಢವಾಗಿ ಹೇಳುತ್ತೇನೆ. ಕರ್ನಾಟಕ ಮಾದರಿಯು ಸಾಮಾಜಿಕ ನ್ಯಾಯ ಮತ್ತು ಸಮಾನತೆಗೆ ಬದ್ಧವಾಗಿದೆ. ಇದು ಭ್ರಾತೃತ್ವದಲ್ಲಿ ಬೇರೂರಿದೆ, ಡೇಟಾ ಆಧಾರಿತವಾಗಿದೆ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಅಳವಡಿಕೆಗೆ ಸಿದ್ಧವಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು. ಔಃಅ ಸಲಹಾ ಸಮಿತಿಯ ಪಾತ್ರ ಮತ್ತು ಮುಂದಿನ ದಾರಿ, ಈ ಸಮಿತಿಯು ಕೇವಲ ಔಪಚಾರಿಕವಲ್ಲ, ಇದು ಭಾರತದ ಸಾಮಾಜಿಕ ನ್ಯಾಯ ಚಳವಳಿಯ ಆತ್ಮ. ಅಹಿಂದ (ಅಲ್ಪಸಂಖ್ಯಾತರು, ಹಿಂದುಳಿದವರು, ದಲಿತರು) ಎಂಬ ಕರ್ನಾಟಕದ ದಾರ್ಶನಿಕ ಒಕ್ಕೂಟವು ರಾಜಕೀಯ, ಸಾಮಾಜಿಕ ಮತ್ತು ನೈತಿಕ ಪಥ ರೂಪಿಸಿದೆ ಎಂದರು.

# ದೇವನಹಳ್ಳಿ ಭೂಸ್ವಾಧೀನ ಅಧಿಸೂಚನೆ ಕೈಬಿಡಲು ತೀರ್ಮಾನ

ಬೆಂಗಳೂರು: ದೇವನಹಳ್ಳಿ ಭೂಸ್ವಾಧೀನ ಅಧಿಸೂಚನೆಯನ್ನು ಕೈಬಿಡಲು ತೀರ್ಮಾನಿಸಲಾಗಿದೆ. ಆದರೆ, ಜಮೀನು ನೀಡಲು ಒಪ್ಪುವ ರೈತರಿಗೆ ಹೆಚ್ಚಿನ ದರ ಹಾಗೂ ಹೆಚ್ಚಿನ ಅಭಿವೃದ್ಧಿಪಡಿಸಿದ ಜಮೀನು ನೀಡಲಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಈ ಮೂಲಕ ರೈತರು ಸುಮಾರು ಮೂರುವರೆ



ವರ್ಷಗಳಿಂದ ನಡೆಸುತ್ತಿದ್ದ ಪ್ರತಿಭಟನೆಗೆ ಜಯ ದೊರೆತಿದೆ. ದೇವನಹಳ್ಳಿಯಲ್ಲಿ ಏರೋಸ್ಪೇಸ್ ನಿರ್ಮಾಣಕ್ಕೆ 1771ಎಕರೆ ಭೂಮಿ ಸ್ವಾಧೀನಕ್ಕಾಗಿ 2022ರಲ್ಲಿ ರಾಜ್ಯ ಸರ್ಕಾರ ಅಂತಿಮ ಅಧಿಸೂಚನೆ ಹೊರಡಿಸಿತ್ತು. ಆದರೆ ಸರ್ಕಾರ ಫಲವತ್ತಾದ ಭೂಮಿಯನ್ನು ವಶಕ್ಕೆ ಪಡೆಯುವುದನ್ನು ವಿರೋಧಿಸಿ ಆಕ್ಷೇಪ ವ್ಯಕ್ತಪಡಿಸಿದ್ದರು.

# ಶಿಷ್ಟಾಚಾರ ಉಲ್ಲಂಘನೆಯಾಗಿದೆ : ಪ್ರಧಾನಿ ಮೋದಿಗೆ ಸಿಎಂ ಪತ್ರ !

ಬೆಂಗಳೂರು: ಸಿಗಂದೂರು ಸೇತುವೆ ಲೋಕಾರ್ಪಣೆ ಹಾಗೂ ವಿವಿಧ ಯೋಜನೆಗಳಿಗೆ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಶಿವಮೊಗ್ಗದ ಈ ಲೋಕಾರ್ಪಣೆ ಕಾರ್ಯಕ್ರಮದ ಬಗ್ಗೆ ಬೇರೆ ಮೂಲದಿಂದ ತಿಳಿದುಕೊಂಡಿದ್ದೇನೆ. ಬಳಿಕ ನಾನು ವೈಯಕ್ತಿಕವಾಗಿ ಮಾತನಾಡುವುದರ ಜೊತೆಗೆ ಜು.11ರಂದು ಕೇಂದ್ರ ರಸ್ತೆ ಸಾರಿಗೆ ಸಚಿವರಿಗೆ ಪತ್ರ ಬರೆದು ವಿಜಯಪುರದಲ್ಲಿ ಪೂರ್ವ ನಿಯೋಜಿತ ಕಾರ್ಯಕ್ರಮ ಇರುವುದರಿಂದ ಶಿವಮೊಗ್ಗದ ಕಾರ್ಯಕ್ರಮ ಮುಂದೂಡುವಂತೆ ಮನವಿ ಮಾಡಿದ್ದೆನು ಎಂದು ತಿಳಿಸಿದ್ದಾರೆ.



# ನವೆಂಬರ್‌ನಲ್ಲಿ ಸಚಿವ ಸಂಪುಟ ವಿಸ್ತರಣೆ–ಸಲೀಮ್ ಅಹ್ಮದ್

ಹಾವೇರಿ: "ನವೆಂಬರ್‌ನಲ್ಲಿ ಸಚಿವ ಸಂಪುಟ ವಿಸ್ತರಣೆಯಾಗುತ್ತದೆ" ಎಂದು ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್ ತಿಳಿಸಿದರು. "ಸಚಿವ ಸ್ಥಾನ ಕಳೆದುಕೊಂಡವರಿಗೆ ಪಕ್ಷದಲ್ಲಿ ಜವಾಬ್ದಾರಿಯುತ ಸ್ಥಾನ ನೀಡಲಾಗುತ್ತದೆ. ಹೊಸಬರಿಗೆ ಅವಕಾಶ ನೀಡುವ ಸಾಧ್ಯತೆ ಇದ್ದು, ಅಂತಿಮವಾಗಿ ಹೈಕಮಾಂಡ್ ಮತ್ತು



ಸಿಎಂ ನಿರ್ಧರಿಸುತ್ತಾರೆ" ಎಂದು ಹೇಳಿದರು. "ಕೆಲ ಸಚಿವರು ಕೆಪಿಸಿಸಿ ಅಧ್ಯಕ್ಷರನ್ನು ಬದಲಾಯಿಸಬೇಕೆಂದು ಕೇಳುತ್ತಿರುವ ಬಗ್ಗೆ ನನಗೆ ಗೊತ್ತಿಲ್ಲ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಮಗೆ ಸಿಎಂ ಮತ್ತು ಕೆಪಿಸಿಸಿ ಅಧ್ಯಕ್ಷರ ಬಗ್ಗೆ ಮಾತನಾಡದಂತೆ ತಿಳಿಸಿದ್ದಾರೆ ಎಂದರು.

# ಸಣ್ಣಪುಟ್ಟ ವ್ಯಾಪಾರಿಗಳಿಗೆ ಲಕ್ಷಾಂತರ ರೂ. ಜಿಎಸ್‌ಟಿ : ನೋಟಿಸ್ ಜಾರಿ




ಬೆಂಗಳೂರು : ಸಣ್ಣಪುಟ್ಟ ವ್ಯಾಪಾರಿಗಳಿಗೆ ಲಕ್ಷಾಂತರ ರೂಪಾಯಿ ಜಿಎಸ್‌ಟಿ ಕಟ್ಟುವಂತೆ ವಾಣಿಜ್ಯ ಇಲಾಖೆ ನೋಟಿಸ್ ನೀಡುತ್ತಿರುವ ಬಗ್ಗೆ ಸಾಕಷ್ಟು ಆಕ್ರೋಶ ವ್ಯಕ್ತವಾಗುತ್ತಿದೆ. ಇದರಿಂದ ಅಂಗಡಿ ಮಾಲೀಕರು ಕಂಗಾಲಾಗಿದ್ದು, ಈ ಸಂಬಂಧ ವಾಣಿಜ್ಯ ಇಲಾಖೆಯು ಸ್ಪಷ್ಟನೆ ನೀಡಿದೆ. ಸು. 40ಲಕ್ಷದಿಂದ 1 ಕೋಟಿ ರೂ.ವರೆಗೆ ದಂಡ ಸಮೇತ ಜಿಎಸ್‌ಟಿ ಕಟ್ಟುವಂತೆ ವಾಣಿಜ್ಯಇಲಾಖೆ ನೋಟಿಸ್ ಕಳುಹಿಸಿದ್ದು, ಸಣ್ಣ ವ್ಯಾಪಾರಸ್ಥರು ದಿಕ್ಕು ತೋಚದಂತೆ ಆಗಿದ್ದಾರೆ. ಕಾಂಡಿಮೆಂಟ್ಸ್ ಅಂಗಡಿ, ತರಕಾರಿ ಅಂಗಡಿ, ಬೇಕರಿ ವ್ಯಾಪಾರಿಗಳಿಗೆ ಲಕ್ಷಾಂತರ ರೂಪಾಯಿ ಜಿಎಸ್‌ಟಿ ಪಾವತಿಸುವಂತೆ ವಾಣಿಜ್ಯ ಇಲಾಖೆ ನೋಟಿಸ್ ನೀಡಿದೆ.

# ಹೊಸ ಕಾನೂನು ಹಾಗೂ ಸುವ್ಯವಸ್ಥೆ ವಿಭಾಗಗಳ ಸೃಷ್ಟಿ

ಬೆಂಗಳೂರು: ರಾಜಧಾನಿಯಲ್ಲಿ ಜನಸಂಖ್ಯೆ ಹೆಚ್ಚಾದಂತೆ ಅಪರಾಧ ಪ್ರಕರಣಗಳು ಏರಿಕೆಯಾಗುತ್ತಿದೆ. ಅಪರಾಧ ನಿಯಂತ್ರಣ ಹಾಗೂ ಪರಿಣಾಮಕಾರಿ ಪೊಲೀಸ್ ವ್ಯವಸ್ಥೆ ಬಲಪಡಿಸಲು ನಗರ ಪೊಲೀಸ್ ಘಟಕದಲ್ಲಿ ಮೂರು ಹೊಸ ಕಾನೂನು ಹಾಗೂ ಸುವ್ಯವಸ್ಥೆ ವಿಭಾ




ಗಗಳನ್ನು ಸೃಷ್ಟಿಸಲಾಗಿದೆ. ಈ ಹಿಂದೆಯಿದ್ದ 8 ಉಪ ವಿಭಾಗಗಳ ಜೊತೆಗೆ, ಹೆಚ್ಚುವರಿ 3 ಘಟಕಗಳು ಸೇರ್ಪಡೆಯಾಗಿದ್ದು, ಒಟ್ಟಾರೆ 11 ಪೊಲೀಸ್ ವಿಭಾಗಗಳು ಕಾರ್ಯ ನಿರ್ವಹಿಸಲಿವೆ. ಹೊಸ ಡಿಸಿಪಿ ಉಪ ವಿಭಾಗಗಳನ್ನು ರಚನೆ ಮಾಡಲಾಗಿದೆ.

# ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ ನೀಡುವಂತೆ ಪತ್ರ

ನವದೆಹಲಿ: ಜಮ್ಮು ಮತ್ತು ಕಾಶ್ಮೀರಕ್ಕೆ ಪೂರ್ಣ ರಾಜ್ಯ ಸ್ಥಾನಮಾನ ನೀಡಲು ಸರ್ಕಾರ ಕಾನೂನು ಜಾರಿಗೆ ತರಬೇಕು ಎಂದು ಒತ್ತಾಯಿಸಿ ಲೋಕಸಭೆಯ ವಿರೋಧ ಪಕ್ಷದ ನಾಯಕ ಸಂಸದ ರಾಹುಲ್‌ಗಾಂಧಿ ಹಾಗೂ ರಾಜ್ಯ ಸಭಾ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಜಂಟಿಯಾಗಿ ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಮುಂಬರುವ ಸಂಸತ್ತಿನ ಮುಂಗಾರು ಅಧಿವೇಶನದಲ್ಲಿ ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯಸ್ಥಾನಮಾನ ನೀಡುವಂತೆ ಸರ್ಕಾರಕ್ಕೆ ನಾವು ಒತ್ತಾಯಿಸುತ್ತಿದ್ದೇವೆ ಎಂದಿರುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಮತ್ತು ಲೋಕಸಭಾ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಈ ಬೇಡಿಕೆಯು ನ್ಯಾಯ ಸಮ್ಮತವಾಗಿದ್ದು ಎಂದಿದ್ದಾರೆ.



# ಪಾಕಿಸ್ತಾನ ಡ್ರೋನ್‌ಗಳು ನಮ್ಮ ರಕ್ಷಣಾ ವ್ಯವಸ್ಥೆಯನ್ನು ಬೇಧಿಸಲು ಸಾಧ್ಯವಾಗಲಿಲ್ಲ

ನವದೆಹಲಿ: ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ದಾಳಿಗೆ ಪ್ರತಿಯಾಗಿ ನಡೆಸಲಾದ 'ಆಪರೇಷನ್ ಸಿಂದೂರ' ಕಾರ್ಯಾಚರಣೆಯ ವೇಳೆ ಭಾರತದ ಮೇಲೆ ದಾಳಿ ಮಾಡಲು ಪಾಕಿಸ್ತಾನ ಡ್ರೋನ್‌ಗಳನ್ನು ಹೆಚ್ಚಾಗಿ ಬಳಸಿತು. ಅವು ನಮ್ಮ ರಕ್ಷಣಾ ವ್ಯವಸ್ಥೆಯನ್ನು ಬೇಧಿಸಲು ಸಾಧ್ಯವಾಗಲಿಲ್ಲ. ಹೀಗಾಗಿ, ನಮಗೆ ಯಾವುದೇ



ಹಾನಿಯಾಗಲಿಲ್ಲ ಎಂದು ರಕ್ಷಣಾ ಪಡೆಗಳ ಮುಖ್ಯಸ್ಥ (ಸಿಡಿಎಸ್) ಜನರಲ್ ಅನಿಲ್ ಚೌಹಾಣ್ ಹೇಳಿದರು. ಯುಎವಿ ಮತ್ತು ಸಿ-ಯುಎಎಸ್ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಪಾಕಿಸ್ತಾನ ಬಳಸುತ್ತಿದ್ದ ಡ್ರೋನ್‌ಗಳನ್ನು ಸ್ಥಳೀಯ ತಂತ್ರಜ್ಞಾನದಿಂದ ಹೊಡೆದು ಹಾಕಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ದೇಶದ ಮಗಳೊಬ್ಬರು ಬೆಂಕಿ ಹಚ್ಚಿಕೊಂಡು ಸಾವನ್ನಪ್ಪಿದರೆ ಪ್ರಧಾನಿ ಮೌನವಾಗಿದ್ದಾರೆ–ರಾಗಾ



ನವದೆಹಲಿ: ಪ್ರಾಧ್ಯಾಪಕರ ಲೈಂಗಿಕ ಕಿರುಕುಳದಿಂದ ನೊಂದು ಬೆಂಕಿ ಹಚ್ಚಿಕೊಂಡು ಸಾವನ್ನಪ್ಪಿದ ಒಡಿಶಾದ ಕಾಲೇಜೊಂದರ ವಿದ್ಯಾರ್ಥಿನಿಯ ಪ್ರಕರಣದ ಬಗ್ಗೆ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಪ್ರಧಾನಿ ಮೋದಿ ವಿರುದ್ಧ ಹರಿಹಾಯ್ದಿದ್ದಾರೆ. "ದೇಶದ ಮಗಳೊಬ್ಬರು ಬೆಂಕಿ ಹಚ್ಚಿಕೊಂಡು ಸಾವನ್ನಪ್ಪಿದ್ದಾರೆ. ಆದರೆ, ಪ್ರಧಾನಿ ಮೌನವಾಗಿದ್ದಾರೆ. ಜನರಿಗೆ ಬೇಕಿರುವುದು ಉತ್ತರವೇ ಹೊರತು ಪ್ರಧಾನಿಯ ಮೌನವಲ್ಲ" ಎಂದು ಹೇಳಿದ್ದಾರೆ. ಲೈಂಗಿಕ ಕಿರುಕುಳ ಹಾಗೂ ಕಾಲೇಜು ಆಡಳಿತ ಮಂಡಳಿ ಯಾವುದೇ ಕ್ರಮಕ್ಕೆ ಮುಂದಾಗದಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿ ಪ್ರಾಂಶುಪಾಲರ ಕೊಠಡಿಯೆದುರೇ ಬೆಂಕಿ ಹಚ್ಚಿಕೊಂಡಿದ್ದರು.

# ಟೆಸ್ಲಾ ಶೋರೂಮ್‌ಗೆ ಚಾಲನೆ ಕೊಟ್ಟ ಮಹಾ ಸಿಎಂ

ಮುಂಬೈ : ಅಮೆರಿಕದ ಎಲೆಕ್ಟ್ರಿಕ್ ಕಾರು ತಯಾರಕ ಕಂಪನಿ ಟೆಸ್ಲಾ ಕೊನೆಗೂ ಭಾರತೀಯ ಮಾರುಕಟ್ಟೆಯಲ್ಲಿ ತನ್ನ ಪ್ರಯಾಣವನ್ನು ಪ್ರಾರಂಭಿಸಿದೆ. ಮುಂಬೈನ ಬಾಂದ್ರಾ ಕುರ್ಲಾ ಕಾಂಪ್ಲೆಕ್ಸ್‌ನಲ್ಲಿ ತನ್ನ ಮೊದಲ ಶೋರೂಮ್ ಅನ್ನು ಪ್ರಾರಂಭಿಸಿದೆ. ಅಷ್ಟೇ ಅಲ್ಲ, ಉದ್ಘಾಟನೆಯೊಂದಿಗೆ ಕಂಪನಿಯು ಇಂದು ಅಧಿಕೃತ




ವೆಬ್‌ಸೈಟ್‌ನಲ್ಲಿ ಹೊಸ ಎಲೆಕ್ಟ್ರಿಕ್ ಕಾರು ಮಾಡೆಲ್‌ವೈ ಅನ್ನು ಲಿಸ್ಟ್ ಮಾಡಿದೆ. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಟೆಸ್ಲಾ ಕಂಪನಿಯ ಮೊದಲ ಶೋರೂಮ್ ಅನ್ನು ಉದ್ಘಾಟಿಸಿದ್ದಾರೆ. ಟೆಸ್ಲಾ ಇಲ್ಲಿ ಲಾಜಿಸ್ಟಿಕ್ಸ್ ಮತ್ತು ಸರ್ವಿಸಿಂಗ್ ವ್ಯವಸ್ಥೆಯನ್ನು ಸ್ಥಾಪಿಸುತ್ತಿದೆ ಎಂದಿದ್ದಾರೆ.

# ಬಿಹಾರ ಮತದಾರರ ಪಟ್ಟಿ ಪರಿಷ್ಕರಣೆ: ಭಾರೀ ಅಕ್ರಮ ವಲಸಿಗರ ಪತ್ತೆ

ನವದೆಹಲಿ: ಬಿಹಾರ ವಿಧಾನಸಭೆ ಚುನಾವಣೆಗೂ ಮೊದಲು ಕೇಂದ್ರ ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅಕ್ರಮ ವಲಸಿಗರು ದೊಡ್ಡ ಸಂಖ್ಯೆಯಲ್ಲಿ ಪತ್ತೆಯಾಗಿದ್ದಾರೆ. ಅವರೆಲ್ಲರೂ ಪಕ್ಕದ ನೇಪಾಳ, ಬಾಂಗ್ಲಾದೇಶ ಮತ್ತು ಮ್ಯಾನ್ಮಾರ್‌ನಿಂದ ಅಕ್ರಮವಾಗಿ ನುಸುಳಿದವರಾಗಿದ್ದಾರೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ. ಚುನಾವಣಾ ಆಯೋಗದ ಕ್ಷೇತ್ರ ಮಟ್ಟದ ಕಾರ್ಯಕರ್ತರು ಮನೆ ಮನೆಗೆ ಭೇಟಿ ನೀಡಿ ಪರಿಶೀಲನೆ ಕಾರ್ಯ ನಡೆಸುತ್ತಿದ್ದು, ಅಕ್ರಮ ನಿವಾಸಿಗಳ ಮಾಹಿತಿ ಸಿಗುತ್ತಿದೆ. ಅವರನ್ನು ಮತದಾರರ ಪಟ್ಟಿಯಿಂದ ಕೈಬಿಡಲಾಗುವುದು ಚುನಾವಣಾಧಿಕಾರಿಗಳು ಹೇಳಿದ್ದಾರೆ.




# ದೇಶವು ಪ್ರತಿಯೊಂದು ಕ್ಷೇತ್ರದಲ್ಲೂ ಪ್ರಗತಿ ಸಾಧಿಸಿದೆ–ಮೋದಿ

ನವದೆಹಲಿ: "ಸಾರ್ವಜನಿಕ ಮತ್ತು ಖಾಸಗಿ ವಲಯಗಳಲ್ಲಿ ಉದ್ಯೋಗ ಸೃಷ್ಟಿಸುವತ್ತ ಕೇಂದ್ರ ಸರ್ಕಾರ ಗಮನ ಹರಿಸಿದೆ. ಕಳೆದ 11 ವರ್ಷಗಳಲ್ಲಿ ದೇಶವು ಪ್ರತಿಯೊಂದು ಕ್ಷೇತ್ರದಲ್ಲೂ ಪ್ರಗತಿ ಸಾಧಿಸಿದೆ" ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. 51 ಸಾವಿರಕ್ಕೂ



ಅಧಿಕ ನೇಮಕಾತಿ ಪತ್ರಗಳನ್ನು ವರ್ಚುಯಲ್ ಆಗಿ ವಿತರಣೆ ಮಾಡಿ ಮಾತನಾಡಿ, "ಬಡವರಿಗೆ 4ಕೋಟಿಗೂ ಹೆಚ್ಚು ಮನೆಗಳ ನಿರ್ಮಾಣ, 10ಕೋಟಿಗೂ ಹೆಚ್ಚು ಹೊಸ LPG ಸಂಪರ್ಕ, ಮೇಲ್ಛಾವಣಿ ಸೌರಶಕ್ತಿ, ಉದ್ಯೋಗಾವಕಾಶಗಳನ್ನು ಸೃಷ್ಟಿಸಲಾಗಿದೆ" ಎಂದು ಹೇಳಿದರು.




## "ಸು ಫ್ರಮ್ ಸೋ" ಜುಲೈ 25 ರಂದು ತೆರೆಗೆ..



ಖ್ಯಾತ ನಟ ರಾಜ್ ಬಿ ಶೆಟ್ಟಿ ಅವರ ಲೈಟರ್ ಬುದ್ಧ ಫಿಲಂಸ್ ಸಂಸ್ಥೆ ಲಾಂಛನದಲ್ಲಿ ಶಶಿಧರ ಶೆಟ್ಟಿ ಬರೋಡಾ, ರವಿ ರೈ ಕಳಸ ಹಾಗೂ ರಾಜ್ ಬಿ ಶೆಟ್ಟಿ ಅವರು ನಿರ್ಮಾಣ ಮಾಡಿರುವ ಹಾಗೂ ಜೆಪಿ ತುಮಿನಾಡು ನಿರ್ದೇಶನದ "ಸು ಫ್ರಮ್ ಸೋ" ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಗಿ ಮೆಚ್ಚುಗೆ ಪಡೆದುಕೊಳ್ಳುತ್ತಿದೆ. ಕಾಮಿಡಿ ಹಾರಾರ್ ಕಥಾಹಂದರ ಹೊಂದಿರುವ ಈ ಚಿತ್ರ ಜುಲೈ 25ರಂದು ತೆರೆಗೆ ಬರಲಿದೆ. ಚಿತ್ರದ ಕುರಿತು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾಹಿತಿ ಹಂಚಿ ಕೊಂಡರು. ರಂಗಭೂಮಿಯಲ್ಲಿ ಸಾಕಷ್ಟು ಹೆಸರು ಮಾಡಿರುವ ಜೆಪಿ ತುಮಿನಾಡ ಮೊದಲ ಬಾರಿಗೆ ನಿರ್ದೇಶನ ಮಾಡಿರುವ ಚಿತ್ರವಿದು. ಆರು ವರ್ಷಗಳ ಹಿಂದೆಯೇ ಅವರು ಸಿದ್ದ ಮಾಡಿಕೊಂಡಿದ್ದ ಈ ಕಥೆ ಈಗ ಸಿನಿಮಾ ರೂಪ ಪಡೆದುಕೊಂಡಿದೆ. ಪ್ರೇಕ್ಷಕರಲ್ಲಿ ಕುತೂಹಲ ಮೂಡಿಸಿದೆ.

## ರಶ್ಮಿಕಾ ಮಂದಣ್ಣ "ದಿ ಗರ್ಲ್ ಫ್ರೆಂಡ್"



ನ್ಯಾಷನಲ್ ಕ್ರಶ್ ರಶ್ಮಿಕಾ ಮಂದಣ್ಣ ಮತ್ತು ದೀಕ್ಷಿತ್ ಶೆಟ್ಟಿ ನಟನೆಯ ಸಿನಿಮಾ 'ದಿ ಗರ್ಲ್ ಫ್ರೆಂಡ್'. ಗೀತಾ ಆರ್ಟ್ಸ್ ಮತ್ತು ಧೀರಜ್ ಮೊಗಿಲೇನಿ ಎಂಟರ್‌ಟೈನ್‌ಮೆಂಟ್ ಬ್ಯಾನರ್‌ಗಳು ಜಂಟಿಯಾಗಿ ನಿರ್ಮಿಸುತ್ತಿದ್ದು, ಅಲ್ಲು ಅರವಿಂದ್ ಈ ಚಿತ್ರವನ್ನು ಪ್ರಸ್ತುತ ಪಡಿಸುತ್ತಿದ್ದಾರೆ. ರಾಹುಲ್ ರವೀಂದ್ರನ್ ನಿರ್ದೇಶನದ ಸುಂದರ ಪ್ರೇಮಕಥೆಯ ಈ ಸಿನಿಮಾದ ಮೊದಲ ಹಾಡು ತೆಲುಗು, ತಮಿಳು, ಹಿಂದಿ, ಕನ್ನಡ ಮತ್ತು ಮಲಯಾಳಂ ಭಾಷೆಗಳಲ್ಲಿ ಬಿಡುಗಡೆಯಾಗಿದೆ. ಹೇಶವ್ ಅಬ್ದುಲ್ ವಹಾಬ್ ಹಾಡಿಗೆ ಮ್ಯೂಸಿಕ್ ನೀಡುವುದರ ಜೊತೆ ಧ್ವನಿಯಾಗಿದ್ದಾರೆ. ನಾಗಾರ್ಜುನ್ ಶರ್ಮಾ ಹಾಡಿಗೆ ಸಾಹಿತ್ಯ ಬರೆದಿದ್ದಾರೆ. ಪ್ರಸ್ತುತ ಈ ಚಿತ್ರ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದೆ.

## ಜಿಂಕೆ ಮರಿ ಸ್ಯಾಂಡಲ್‌ವುಡ್‌ಗೆ ಮತ್ತೆ ಕಂಬ್ಯಾಕ್..

'ಜಿಂಕೆ ಮರೀನಾ, ಜಿಂಕೆ ಮರೀನಾ..ಅಂತಾ ಕುಣಿದು ಫೇಮಸ್ ಆಗಿದ್ದ ನಂದಿತಾ ಶ್ವೇತಾ ಮತ್ತೆ ಕನ್ನಡ ಚಿತ್ರರಂಗದತ್ತ ಮುಖ ಮಾಡಿದ್ದಾರೆ. ನಂದಾ ಲವ್ಸ್ ನಂದಿತಾ ಸಿನಿಮಾ ಮೂಲಕ ಕನ್ನಡ ಸಿನಿಪ್ರಿಯರ ಮುಂದೆ ಬಂದಿದ್ದ ಶ್ವೇತಾ, ಆ ಬಳಿಕ ತೆಲುಗು, ತಮಿಳು ಚಿತ್ರರಂಗದತ್ತ ಮುಖ ಮಾಡಿದರು. ಇದೀಗ ಮತ್ತೊಮ್ಮೆ ನಂದಿತಾ ಶ್ವೇತಾ ಸ್ಯಾಂಡಲ್‌ವುಡ್‌ಗೆ ಕಂಬ್ಯಾಕ್ ಆಗುತ್ತಿದ್ದಾರೆ. ನಂದಿತಾ ಶ್ವೇತಾ ಅವರನ್ನು ಮತ್ತೊಮ್ಮೆ ಕನ್ನಡ ಚಿತ್ರರಂಗದತ್ತ ಹೊಂದಿಸಿ ಬರೆಯಿರಿ ಸಿನಿಮಾದ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್ ಕರೆದುಕೊಂಡು ಬರುತ್ತಿದ್ದಾರೆ. ಈ ಹಿಂದೆ ಪೆಪೆ ಸಿನಿಮಾ ನಿರ್ದೇಶನ ಮಾಡಿದ್ದ ಶ್ರೀಲೇಶ್ ಎಸ್ ನಾಯರ್ 'ಬೆನ್ನಿ' ಎಂಬ ಮಹಿಳಾ ಪ್ರಧಾನ ಸಿನಿಮಾ ನಿರ್ದೇಶನಕ್ಕೆ ಮುಂದಾಗಿದ್ದಾರೆ. ಈಗಾಗಲೇ ಬಿಡುಗಡೆಯಾಗಿರುವ ಈ ಚಿತ್ರದ ಫಸ್ಟ್ ಝಲಕ್‌ನಲ್ಲಿ ಕಿಚ್ಚ ಸುದೀಪ್ ಧ್ವನಿಯಿದ್ದು, ರಕ್ತಸಿಕ್ತ ಅವತಾರದಲ್ಲಿ ನಂದಿತಾ ಶ್ವೇತಾ ಮಿಂಚಿದ್ದಾರೆ.



## ಕಿರಣ್ ರಾಜ್‌ಗೆ ಹೃತಿಕಾ ಶ್ರೀನಿವಾಸ್ ನಾಯಕಿ..

ಕಿರಣ್ ರಾಜ್ ನಾಯಕನಾಗಿ ನಟಿಸುತ್ತಿರುವ "ಜಾಕಿ–42" ಚಿತ್ರಕ್ಕೆ ಹೃತಿಕಾ ಶ್ರೀನಿವಾಸ್ ನಾಯಕಿಯಾಗಿ ಆಯ್ಕೆಯಾಗಿದ್ದಾರೆ. ಮಾಡರ್ನ್ ಹಾಗೂ ಹೋಮ್ಲಿ ಎರಡು ಶೇಡ್ ಇರುವ ಪಾತ್ರ ಇದಾಗಿದೆ. ಹೃತಿಕ ಶ್ರೀನಿವಾಸ್, ಯೋಗರಾಜ್ ಭಟ್ ಸಿನಿಮಾಸ್ ಹಾಗೂ ರವಿ ಶಾಮನೂರು ನಿರ್ಮಾಣದ "ಉಡಾಳ" ಚಿತ್ರದಲ್ಲಿ ನಾಯಕಿಯಾಗಿ ಅಭಿನಯಿಸಿದ್ದಾರೆ. ಸದ್ಯ ತೆಲುಗು ಚಿತ್ರವೊಂದರ ಚಿತ್ರೀಕರಣದಲ್ಲಿ ಬ್ಯುಸಿ ಆಗಿರುವ ಅವರು ಸದ್ಯದಲ್ಲೇ "ಜಾಕಿ–42" ಚಿತ್ರ ತಂಡ ಸೇರಿಕೊಳ್ಳಲಿದ್ದಾರೆ. "ಜಾಕಿ–42" ಹಾರ್ಸ್ ರೇಸ್ ಹಿನ್ನೆಲೆಯಲ್ಲಿ ಕಥೆ ಸಾಗುತ್ತದೆ. ಗೋಲ್ಡನ್ ಗೇಟ್ ಸ್ಟುಡಿಯೋಸ್ ಬ್ಯಾನರ್‌ನಲ್ಲಿ ಭಾರತಿ ಸತ್ಯನಾರಾಯಣ ಈ ಚಿತ್ರ ನಿರ್ಮಿಸುತ್ತಿದ್ದಾರೆ. ತೆಲುಗು ಹಾಗೂ ತಮಿಳಿನ ಜನಪ್ರಿಯ ಚಿತ್ರಗಳಿಗೆ ಸಂಗೀತ ನೀಡಿರುವ ನಿರ್ದೇಶಕ ವಿನೋದ್ ಯಜಮಾನ ಸಂಗೀತ ನೀಡುತ್ತಿದ್ದಾರೆ. ಕನ್ನಡ, ತಮಿಳು ಹಾಗೂ ತೆಲುಗಿನ ಕಲಾವಿದರು ತಾರಾಗಣದಲ್ಲಿದ್ದಾರೆ.









Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 **9880109212**